ಬಿಟ್ಟು ತೊಲಗಿ ಎಂದು ಹೇಳಲಿಚ್ಚಿಸುತ್ತೇನೆ. ದಯಮಾಡಿ ಸದನವನ್ನು ಮುಂದೂಡಿ, ಮುಂದಿನ ತಿಂಗಳು ಅಧಿವೇಶನ ಕರೆಯಿರಿ, ಆಗ ಸುದೀರ್ಘವಾಗಿ ಚರ್ಚೆ ಮಾಡೋಣವೆಂದು ಹೇಳುತ್ತಾ, ಇವತ್ತೇನು ಕೈಜೋಡಿಸುವುದಕ್ಕೆ ಹೊರಟಿದ್ದಾರೆ ಅದನ್ನು ಪ್ರತಿಭಟಿಸುತ್ತೇವೆ. ಇವರಿಗೆ ರಾಜ್ಯದ ಹಿತ ಮುಖ್ಯವಲ್ಲ.

(ಗೊಂದಲ)

ಅಧ್ಯಕ್ಷರು : ನಾನು ನಿಮ್ಮ ಎರಡೂ ಕಡೆಯವಾದ ಕೇಳಿದ್ದೇನೆ. ಮಾನ್ಯ ನಂಜೇಗೌಡರು ಖರ್ಗೆಯವರು ಮತ್ತು ವಿರೋಧಪಕ್ಷದ ನಾಯಕರು ಹೇಳಿದವಾದವನ್ನು ನಾನು ಕೇಳಿದೆ. ನನ್ನ ಮುಂದಿರುವ ಅಜೆಂಡದಂತೆ ನಾನು ಸದನ ನಡೆಸಬೇಕು ಅದಕ್ಕೆ ಸರ್ಕಾರವನ್ನು ಮತ್ತೊಮ್ಮೆ ಕೇಳುತ್ತೇನೆ, ಇನ್ನೂ ಒಂದೂವರೆ ತಿಂಗಳ ಅವಕಾಶ ಇದೆ ಎಂದು ಏನು ಸಲಹೆ ಇದೆ ಅದರ ಪ್ರಕಾರ ಸದನವನ್ನು ಒಂದು ವಾರ ಮುಂದೂಡಿ ಈ ವಿಚಾರ ತೆಗೆದುಕೊಳ್ಳಲು ತಯಾರಿದ್ದೀರ ಎಂದು ಕೇಳುತ್ತೇನೆ ಏಕೆಂದರೆ ಅವರ ಅಭಿಪ್ರಾಯ ಕೇಳಿದ ನಂತರ ನನ್ನ ನಿರ್ಣಯ ನಾನು ತೆಗೆದುಕೊಳ್ಳಬೇಕಾಗುತ್ತದೆ. ಮಾನ್ಯ ನಂಜೇಗೌಡರು ಇಟ್ಟಿರುವ ಸಲಹೆಯನ್ನು ತಾವೇನಾದರೂ ಪರಿಗಣಿಸುತ್ತೀರಾ?

(ಗೊಂದಲ)

ಶ್ರೀ ಸಿದ್ಧರಾಮಯ್ಯ : ಮಾನ್ಯ ಅಧ್ಯಕ್ಷರೆ, ಅಜೆಂಡಾ ಪ್ರಕಾರ ಸದನ ನಡೆಯಲಿ, ಈಗಾಗಲೇ ತೀರ್ಮಾನವಾಗಿದೆ. ಇವತ್ತು ಅಪ್ರೊಪ್ರಿಯೇಷನ್ ಬಿಲ್ ಪಾಸ್ ಆಗಬೇಕು ಮತ್ತು ಎಲ್ಲಾ ಬೇಡಿಕೆಗಳು ಕೂಡ ಪಾಸಾಗಬೇಕಾಗಿದೆ. ನಾಳೆ ಅಪ್ರೊಪ್ರಿಯೇಷನ್ ಬಿಲ್ ಪಾಸಾಗುವುದು ಇದೆ. ಆದ್ದರಿಂದ ದಯಮಾಡಿ ಸದನ ಮುಂದೂಡುವುದು ಬೇಡ. ಎಲ್ಲ ಸದಸ್ಯರಲ್ಲಿ ನಾನು ಮನವಿ ಮಾಡುತ್ತೇನೆ. ನಾಳೆ ಮಾನ್ಯ ಮುಖ್ಯ ಮಂತ್ರಿಗಳು ಬಂದು ಹೇಳಿಕೆ ಕೊಡುತ್ತಾರೆ. ಇವತ್ತು ಎಲ್ಲ ಬೇಡಿಕೆಗಳ ಬಗ್ಗೆ ಚರ್ಚೆ ನಡೆಸೋಣ ಪಾಸ್ ಮಾಡಿಕೊಡಬೇಕೆಂದು ವಿನಂತಿಸುತ್ತೇನೆ.

(ಗೊಂದಲ)

(ವಿರೋಧ ಪಕ್ಷದ ಎಲ್ಲ ಸದಸ್ಯರೂ ವೆಲ್‌ನಲ್ಲಿ ನಿಂತು ಮಾತನಾಡತೊಡಗಿದರು)

ಒಬ್ಬ ಮಾನ್ಯ ಸದಸ್ಯರು : ಅಲ್ಲಿ ಏನು ನಡೆದಿದೆ ಅದರ ಹೇಳಿಕೆಯನ್ನು ಕೊಡುತ್ತಾರೆ.

ಅಧ್ಯಕ್ಷರು : ಈಗ ಬೇಡಿಕೆಗಳನ್ನು ಸಭೆಯ ಮತಕ್ಕೆ ಹಾಕುತ್ತೇನೆ.

(ನಾಚಿಕೆಗೇಡು ಧಿಕ್ಕಾರ ಎಂದು ವೆಲ್‌ನಲ್ಲಿದ್ದ ಸದಸ್ಯರು ಘೋಷಣೆ ಕೂಗತೊಡಗಿದರು)

ವಿತ್ತೀಯ ಕಾರ್ಯಕಲಾಪಗಳು

1996-97ನೇ ಸಾಲಿನ ಇಲಾಖಾ ಬೇಡಿಕೆಗಳನ್ನು ಮತಕ್ಕೆ ಹಾಕುವುದು.

ಅಧ್ಯಕ್ಷರು : 1996-97ನೇ ಸಾಲಿನ ಅನುದಾನ ಬೇಡಿಕೆಗಳಿಗೆ ಸಂಬಂಧಿಸಿದ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವವೇನೆಂದರೆ.

31-3-1997 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬರುವ ಅಭಿಯಾಚನೆಗಳ ಕ್ರಮಾಂಕ 1, 2, 3, 4, 5, 6, 7, 8, 9, 12, 13, 15, 16, 17, 18, 19, 20, 21, 22, 27, 33, 34, 39, 41, 42, 43, 44, 45, 46, 48, 49, 50, 52, 53, 54, 55, 56, 57, 58, 59 ಹಾಗೂ 60 ಇವುಗಳಿಗೆ ಸಂಬಂಧಿಸಿದಂತೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ಲೇಖಾನುದಾನದಲ್ಲಿ ಮಂಜೂರಾದ ಮೊತ್ತವು ಸೇರಿದಂತೆ ಬೇಡಿಕೆಗಳ ಪಟ್ಟಿಯಲ್ಲಿರುವ ಮೊತ್ತಕ್ಕೆ ಮೀರದ ಮೊಬಲಗುಗಳನ್ನು ಮಂಜೂರು ಮಾಡಬೇಕು.

ಪ್ರಸ್ತಾವನ್ನು ಅಂಗೀಕರಿಸಲಾಯಿತು ಮತ್ತು ಬೇಡಿಕೆಗಳನ್ನು ಮಂಜೂರು ಮಾಡಲಾಯಿತು.

(ಮಾನ್ಯ ಅಧ್ಯಕ್ಷರ ಆದೇಶದ ಮೇರೆಗೆ ಮಂಜೂರಾದ ಬೇಡಿಕೆಗಳನ್ನು ಈ ಕೆಳಗೆ ನಮೂದಿಸಲಾಗಿದೆ).

ಅಭಿಯಾಚನೆ ಕ್ರಮಾಂಕ 1 ವ್ಯವಸಾಯ ಇಲಾಖೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ವ್ಯವಸಾಯಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 231, 50, 27, 000 ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 731,85,000 ರೂ. ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 2 ತೋಟಗಾರಿಕಾ ಇಲಾಖೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ತೋಟಗಾರಿಕೆಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 68,00,30,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 130,00,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 3. ಪಶುಸಂಗೋಪನಾ ಇಲಾಖೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಪಶುಸಂಗೋಪನೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 105,22,30,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 37,00,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 4 ಮೀನುಗಾರಿಕೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಮೀನುಗಾರಿಕೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ಭರಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 24,49,06,000 ರೂ. ಗಳಿಗಿಂತ ಮೀರದ ಮೊತ್ತವನ್ನು

ಮತ್ತು ಬಂಡವಾಳ ಖಾತೆಯಲ್ಲಿ 4,81,45,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 5 ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳು (ಜವಳಿ ಸಕ್ಕರೆ ಮತ್ತು ರೇಷ್ಮೆ ವ್ಯವಸಾಯದ ಹೊರತು)

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಉದ್ಯಮಗಳಿಗೆ (ಜವಳಿ ಸಕ್ಕರೆ ಮತ್ತು ರೇಷ್ಮೆ ವ್ಯವಸಾಯದ ಹೊರತು) ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 53,31,72,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 51,05,00,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 6 ಗಣಿ ಮತ್ತು ಭೂ ವಿಜ್ಞಾನ ಇಲಾಖೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಗಣಿಗಳು ಮತ್ತು ಭೂ ವಿಜ್ಞಾನಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 13,62,35,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 7 ಚಿಕ್ಕ ಪುಟ್ಟ ಉದ್ಯಮಗಳು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97ರಂಗು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಚಿಕ್ಕ ಪುಟ್ಟ ಉದ್ಯಮಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 112,60,86,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 12,22,00,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ : 8 ರೇಷ್ಮೆ ವ್ಯವಸಾಯ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ರೇಷ್ಮೆ ವ್ಯವಸಾಯಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 125,57,86,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 871,00,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 9 ಸಕ್ಕರೆ ಮತ್ತು ಜವಳಿ ಉದ್ಯಮಗಳು ಇತ್ಯಾದಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಸಕ್ಕರೆ ಮತ್ತು ಜವಳಿ ಉದ್ಯಮಗಳು ಇತ್ಯಾದಿಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 30,45,25,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 9,61,00,000

ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 12 ಯುವ ಜನ ಸೇವೆ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಯುವ ಜನ ಸೇವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 35,15,07,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 13 ಸಂಸ್ಕೃತಿ ಮತ್ತು ಕನ್ನಡಾಭಿವೃದ್ಧಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಕಲೆ ಸಂಸ್ಕೃತಿ ಮತ್ತು ಕನ್ನಡಾಭಿವೃದ್ಧಿಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 16,39,08,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 15 ವರಮಾನ, ವೃತ್ತಿಗಳು ಮಾರಾಟ ಮತ್ತು ಇತರ ಸೇವೆಗಳ ಮೇಲಿನ ತೆರಿಗೆಗಳು.

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ವರಮಾನ ವೃತ್ತಿಗಳು ಮಾರಾಟ ಮತ್ತು ಇತರ ಸೇವೆಗಳ ಮೇಲಿನ ತೆರಿಗೆಗಳಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 90,51,21,000 ರೂ.ಗಳಿಗಿಂತ ಮೀರದ ಮೊತ್ತವನ್ನೂ (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ–16- ವಿಶ್ರಾಂತಿವೇತನ ಮತ್ತು ಇತರ ನಿವೃತ್ತಿ ಸೌಲಭ್ಯಗಳು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ವಿಶ್ರಾಂತಿವೇತನ ಮತ್ತುಇತರ ನಿವೃತ್ತಿ ಸೌಲಭ್ಯಗಳಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 703,10,00,000ರೂ.ಗಳಿಗಿಂತ ಮೀರದ ಮೊತ್ತವನ್ನೂ (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ–17- ಸರಕಾರಿ ನೌಕರರಿಗೆ ಸಹಾಯ ಮತ್ತು ವಿವಿಧ ಸಾಲಗಳು.

• ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1997 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಸರ್ಕಾರಿ ನೌಕರರಿಗೆ ಸಹಾಯ ಮತ್ತು ವಿವಿಧ ಸಾಲಗಳಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 13,45,00,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 15,86,60,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ-18- ಸಣ್ಣ ಉಳಿತಾಯಗಳು ಮತ್ತು ರಾಜ್ಯ ಲಾಟರಿಗಳು, ವಿಮೆ, ಖಜಾನೆ ಮತ್ತು ಲೆಕ್ಕ ಆಡಳಿತ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1997 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಸಣ್ಣ ಉಳಿತಾಯಗಳು ಮತ್ತು ರಾಜ್ಯ ಲಾಟರಿ, ವಿಮೆ ಮತ್ತು ರಾಜ್ಯ ಲೆಕ್ಕ ಪತ್ರ"ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 81,82,17,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 15,00,000 ರೂ.ಗಳಿಗೆ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಭಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ-19- ಇತರೇ ವಿವಿಧ ಸೇವೆಗಳು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1997 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಇತರೇ ವಿವಿಧ ಸೇವೆಗಳಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 46,25,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 6,85,00,000 ರೂ.ಗಳಿಗೆ ಮಿರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ-20-ಆಹಾರ ಮತ್ತು ನಿತ್ಯೋಪಯೋಗಿ ಸಾಮಗ್ರಿಗಳ ಸರಬರಾಜು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1997 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಆಹಾರ ಮತ್ತು ನಿತ್ಯೋಪಯೋಗಿ ಸಾಮಗ್ರಿಗಳ ಸರಬರಾಜು" ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 275,85,23,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 20,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ-21-ಅರಣ್ಯ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1997ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಅರಣ್ಯ" ಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 204,06,78,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 10,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ-22-ರಾಜ್ಯದ ಆಬಕಾರಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1997 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ರಾಜ್ಯದ ಆಬಕಾರಿ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 27,06,64,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ-27- ಪ್ರವಾಸೋದ್ಯಮ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1997 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಪ್ರವಾಸೋದ್ಯಮಕ್ಕೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 16,85,31,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 33, ಸಣ್ಣ ನೀರಾವರಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಸಣ್ಣ ನೀರಾವರಿಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 48,88,66,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 81,58,92,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 34 ಭಾರಿ ಮತ್ತು ಮಧ್ಯಮ ನೀರಾವರಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಭಾರಿ ಮತ್ತು ಮಧ್ಯಮ ನೀರಾವರಿಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 499,96,55,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 910,38,53,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 39-ಜಿಲ್ಲಾಡಳಿತ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಜಿಲ್ಲಾಡಳಿತಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 100,29,74,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 41-ಯೋಜನೆ ಮತ್ತು ಸಾಂಖ್ಯಿಕ ಹಣಕಾಸು (ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಲಿ ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಲಿಗಳನ್ನು ಹೊರತುಪಡಿಸಿ)

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಯೋಜನೆ ಮತ್ತು ಸಾಂಖ್ಯಿಕ ಹಣಕಾಸು ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಲಿ ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಲಿಗಳನ್ನು ಹೊರತುಪಡಿಸಿ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 27,75,20,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 34,00,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಯಾಚನೆ ಕ್ರಮಾಂಕ 42-ಹಿಂದುಳಿದ ಪ್ರದೇಶಗಳ ಅಭಿವೃದ್ಧಿ ಇತ್ಯಾದಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಹಿಂದುಳಿದ ಪ್ರದೇಶಗಳ ಅಭಿವೃದ್ಧಿ ಇತ್ಯಾದಿಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 112,10,88,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಯಾಚನೆ ಕ್ರಮಾಂಕ 43 ಲೋಕೋಪಯೋಗಿ ಕಾಮಗಾರಿ (ನಿರ್ಮಾಣ ಹೊರತು)

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಲೋಕೋಪಯೋಗಿ ಕಾಮಗಾರಿ (ನಿರ್ಮಾಣ ಹೊರತುಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 214,56,85,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಯಾಚನೆ ಕ್ರಮಾಂಕ-44 ಕಟ್ಟಡಗಳು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಕಟ್ಟಡಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 15,63,31,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 106,99,61,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಯಾಚನೆ ಕ್ರಮಾಂಕ 45-ರಸ್ತೆಗಳು ಮತ್ತು ಸೇತುವೆಗಳು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ರಸ್ತೆಗಳು ಮತ್ತು ಸೇತುವೆಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 170,38,84,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 57,90,00,000 ರೂ.ಗಳಿಗಿಂತ ಮೀರದ ಮೊತ್ತವನ್ನು . ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಯಾಚನೆ ಕ್ರಮಾಂಕ, 46-ರೇವು ಮತ್ತು ಜಲಸಾರಿಗೆ ಸೇವೆಗಳು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ರೇವು ಮತ್ತು ಜಲಸಾರಿಗೆ ಸೇವೆಗಳಿಗಾಗಿ ಸಂದಾಯ ಮಾಡುವಲ್ಲಿ ಬರತಕ್ಕಂಥಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 418,74,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 657,00,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಯಾಚನೆ ಕ್ರಮಾಂಕ 48 ಭೂ ಕಂದಾಯ ಇತ್ಯಾದಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಭೂ ಕಂದಾಯ ಇತ್ಯಾದಿಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ

ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 86,61,12,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 601,75,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 49 ಮುದ್ರಾಂಕಗಳು ಮತ್ತು ನೋಂದಣಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಮುದ್ರಾಂಕಗಳು ಮತ್ತು ನೊಂದಣಿಗೆಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 13,48,07,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 50 ಮತೀಯ ಮತ್ತು ಧರ್ಮಾದಾಯ ಸಂಸ್ಥೆಗಳು ಇತ್ಯಾದಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಮತೀಯ ಮತ್ತು ಧರ್ಮಾದಾಯ ಸಂಸ್ಥೆಗಳು ಇತ್ಯಾದಿಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 12,90,93,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 52-ಸಹಕಾರ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-197 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಸಹಕಾರಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 48,31,81,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 23,16,00,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 53-ಕ್ರಮಪಡಿಸಿದ ಮಾರುಕಟ್ಟೆಗಳು

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಕ್ರಮಪಡಿಸಿದ ಮಾರುಕಟ್ಟೆಗಳಿಗಾಗಿ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 21,32,25,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 54ಗ್ರಾಮಾಂತರ ನೀರು ಸರಬರಾಜು ಮತ್ತು ನೈರ್ಮಲ್ಯ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಗ್ರಾಮಾಂತರ ನೀರು ಸರಬರಾಜು ಮತ್ತು ನೈರ್ಮಲ್ಯಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 3,34,14,26,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 55 ಗ್ರಾಮೀಣಾಭಿವೃದ್ಧಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಗ್ರಾಮೀಣಾಭಿವೃದ್ಧಿಗಾಗಿ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 646,08,97,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 56 - ಕಾರ್ಮಿಕ ಮತ್ತು ಉದ್ಯೋಗ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಕಾರ್ಮಿಕ ಮತ್ತು ಉದ್ಯೋಗಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 67,52,30,000 ರೂ.ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 57 - ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗದವರ ಕಲ್ಯಾಣ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗದವರ ಕಲ್ಯಾಣಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 296,48,09,000 ರೂ. ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 22,56,00,000 ರೂ. ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 58 - ಮಹಿಳಾ ಮತ್ತು ಮಕ್ಕಳ ಕಲ್ಯಾಣ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 287,25,96,000 ರೂ. ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 100,00,000 ರೂ. ಗಳಿಗಿಂತ ಮೀರದ ಮೊತ್ತವನ್ನು ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 59 - ವಿಜ್ಞಾನ ಮತ್ತು ತಂತ್ರಜ್ಞಾನ ಜೀವಿ ಪರಿಸ್ಥಿತಿ ಮತ್ತು ಪರಿಸರ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ವಿಜ್ಞಾನ ಮತ್ತು ತಂತ್ರಜ್ಞಾನ ಜೀವಿ ಪರಿಸ್ಥಿತಿ ಮತ್ತು ಪರಿಸರ"ಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 8,10,00,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಭಿಯಾಚನೆ ಕ್ರಮಾಂಕ 60 - ಮಲೆನಾಡು ಪ್ರದೇಶಾಭಿವೃದ್ಧಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-97ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಮಲೆನಾಡು ಪ್ರದೇಶಾಭಿವೃದ್ಧಿಗೆ ಸಂದಾಯ ಮಾಡುವಲ್ಲಿ ಬರತಕ್ಕಂತಹ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 30,00,00,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು.

ಅಧ್ಯಕ್ಷರು : ಈಗ ಸಭೆಯನ್ನು ಮುಂದೂಡಿ ಮತ್ತೆ 3-00 ಗಂಟೆಗೆ ಸಮಾವೇಶಗೊಳ್ಳುವುದು.

(ಸಭೆಯು 1-48ಕ್ಕೆ ಮುಂದೂಡಲ್ಪಟ್ಟಿತು)

(ಸಭೆಯು ಮತ್ತೆ 3.20 ಗಂಟೆಗೆ ಸಮಾವೇಶಗೊಂಡಿತು ಮಾನ್ಯ ಅಧ್ಯಕ್ಷರು ಅಧ್ಯಕ್ಷರ ಪೀಠವನ್ನು ಅಲಂಕರಿಸಿದರು)

(ಬಿ.ಜೆ.ಪಿ.ಯ ಕೆಲವು ಸದಸ್ಯರು ಮತ್ತು ಕಾಂಗ್ರೆಸ್ ಪಕ್ಷದ ಕೆಲವು ಸದಸ್ಯರು, ಮತ್ತಿತರ ಸದಸ್ಯರುಗಳು ಸದನದ ಬಾವಿಯಲ್ಲಿ ಧರಣಿ ನಡೆಸುತ್ತಿದ್ದರು)

3. ನಿಯಮ 167ರ ಮೇರೆಗೆ

ಶ್ರೀ ಜೆ.ಹೆಚ್. ಪಟೇಲ್ ಸರ್ಕಾರದ ವಿರುದ್ಧ ಅವಿಶ್ವಾಸ ನಿರ್ಣಯದ ಮಂಡನೆಗೆ ಕೋರಿಕೆ.

ಶ್ರೀ ಬಿ.ಎಸ್. ಯಡಿಯೂರಪ್ಪ (ವಿರೋಧ ಪಕ್ಷದ ನಾಯಕರು) : ಮಾನ್ಯ ಅಧ್ಯಕ್ಷರೆ, ಇವತ್ತು ನಾವು ತಮ್ಮ ಹತ್ತಿರ ಬಂದು ಒಂದು ಅನಿವಾರ್ಯವಾದ ವಿಶೇಷವಾದಂತಹ ಸಂದರ್ಭದಲ್ಲಿ ಮಾನ್ಯ ಜೆ.ಹೆಚ್. ಪಟೇಲ್‌ರವರ ಮಂತ್ರಿಮಂಡಲದ ವಿರುದ್ಧ ಅವಿಶ್ವಾಸ ನಿರ್ಣಯ ಮಂಡನೆ ಮಾಡುವ ನೋಟೀಸ್ ಅನ್ನು ನಿಯಮ 167ರ ಅಡಿಯಲ್ಲಿ ನಿಮ್ಮ ಕೊಠಡಿಗೆ ನಾವು ಬಂದು ಕೊಟ್ಟಿದ್ದೇವೆ. ಅದರಲ್ಲಿ ಬಿ.ಜೆ.ಪಿ. ಸದಸ್ಯರು, ಕಾಂಗ್ರೆಸ್ ಪಕ್ಷದ ಸದಸ್ಯರು, ವಾಟಾಳ್ ಪಕ್ಷದವರು, ಕರ್ನಾಟಕ ಕಾಂಗ್ರೆಸ್ ಪಕ್ಷದವರು, ಕರ್ನಾಟಕ ರೈತ ಸಂಘದವರು, ಪಕ್ಷೇತರ ಗುಂಪಿನ ಮುಖಂಡರಾದಂತಹ ಶ್ರೀ ಶಿವನಂಜಪ್ಪನವರು ಇತರ ಸದಸ್ಯರುಗಳು ಸಹಿ ಮಾಡಿ ತಮಗೆ ಕೊಟ್ಟಿದ್ದೇವೆ. ದಯಮಾಡಿ ಅದನ್ನು ತಾವು ಚರ್ಚೆಗೆ ತೆಗೆದುಕೊಳ್ಳಬೇಕು. ಅಲ್ಲಿಯವರೆಗೆ ಬೇರೆ ಯಾವುದೇ ಬಿಸಿನೆಸ್ ಮಾಡುವುದಕ್ಕೆ ತಾವು ನಿಯಮಾವಳಿಯ ಪ್ರಕಾರ ಅವಕಾಶವನ್ನು ಕೊಡಬಾರದೆಂದು ನಾನು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು : ನನಗೆ ನೋಟೀಸ್ ಬಂದಿದೆ.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ : ಮಾನ್ಯ ಅಧ್ಯಕ್ಷರೆ, ಅದೇ ವಿಷಯದ ಬಗ್ಗೆ ಈಗಾಗಲೇ ನಿಯಮ 167ರ ಕೆಳಗೆ ನಾವು ನೋಟೀಸ್ ಕೊಟ್ಟಿದ್ದೇವೆ. ಅದನ್ನು ಕೊಡುವಂತಹ ಅವಶ್ಯಕತೆ ಏಕೆ ಬಂತು ಎಂದರೆ ಇದಕ್ಕೂ ಮುಂಚೆ ಈ ಸದನದಲ್ಲಿ ನಾವು ಚರ್ಚೆಗೆ ಕಾಲಾವಕಾಶವನ್ನು ಕೇಳಿದ್ದೇವೆ. ಕನಿಷ್ಟ ಪಕ್ಷ ನಾಲ್ಕೈದು ದಿವಸಗಳು ಸದನವನ್ನು ಮುಂದೂಡಿ, ಈ ಸಂದರ್ಭದಲ್ಲಿ ಅನೇಕ ವಿಷಯಗಳನ್ನು ಈ ಸದನದ ಮುಂದೆ ಇಡಬೇಕಾಗುತ್ತದೆ. ಅದಕ್ಕಾಗಿ ದಯಮಾಡಿ ಮುಂದಕ್ಕೆ ಹಾಕಿ ಎಂದು ಸರ್ಕಾರವನ್ನು ನಾವು ಕೇಳಿಕೊಂಡೆವು. ಅದಕ್ಕೆ ಅವರು ಒಪ್ಪಲಿಲ್ಲ. ಅದಕ್ಕಾಗಿ